# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

## ವಾರ್ಡ್ ನಂ.70 : ರಾಜಗೋಪಾಲನಗರ

**ದಿನಾಂಕ: 05.12.2020 ರಂದು ಮಧ್ಯಾಹ್ನ 3.30 ಗಂಟೆಗೆ ಶ್ರೀಮತಿ ಕಮಲ ಹೆಚ್ ನೋಡಲ್ ಅಧಿಕಾರಿ, ವಾರ್ಡ್ 70 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರಸಂ | ಹೆಸರು | ಪದನಾಮ |
|---|---|---|
| 1 | ಶ್ರೀಮತಿ ಕಮಲ ಹೆಚ್ | ನೋಡಲ್ ಅಧಿಕಾರಿ–ವಾರ್ಡ್ ನಂ.70 |
| 2 | ಶ್ರೀ ಹೇಮಂತ್ ಕುಮಾರ್ ಎಸ್ ಕೆ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 70 |
| 3 | ಶಿವಲಿಂಗಯ್ಯ.ಕೆ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70 |
| 4 | ತ್ರಿವೇಣಿ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70 |
| 5 | ಚಂದ್ರಯ್ಯ ಎಸ್ ಟಿ | ಕಂದಾಯ ಪರಿವೀಕ್ಷಕರು |
| 6 | ಗಿರೀಶ್ ಎಂ ಆರ್ | ಗುತ್ತಿಗೆದಾರರು, ಬೀದಿದೀಪಗಳ ನಿರ್ವಹಣೆ |
| 7 | ರಾಮಕೃಷ್ಣೇಗೌಡ ಎನ್.ಎಲ್ | ಪರಿವೀಕ್ಷಕರು–ಬಿ.ಡಬ್ಲ್ಯೂ.ಎಸ್.ಎಸ್.ಬಿ |

**:ನಡಾವಳಿಯ ವರದಿ:**

- ಕಾರ್ಯದರ್ಶಿಗಳಾದ ಶ್ರೀ ಹೇಮಂತ್ ಕುಮಾರ್ ಎಸ್ ಕೆ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- **ಹಿಂದಿನ ವಾರ್ಡ್ ಸಮಿತಿ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳಿಗೆ ಕೈಗೊಂಡ ಕ್ರಮಗಳ ಬಗ್ಗೆ**
  - ವಾರ್ಡ್ 70ರ ವ್ಯಾಪ್ತಿಯಲ್ಲಿ ಡಿ.ಡಬ್ಲ್ಯೂಸಿ ಸೆಂಟರ್ ಬಳಿ ನಿರ್ವಹಿಸುತ್ತಿರುವ ಚರಂಡಿ ಕಾಮಗಾರಿಯ ಬಗ್ಗೆ: ಹೇಮಂತ್ ಕುಮಾರ್ ಎಸ್.ಕೆ ಸಹಾಯಕ ಅಭಿಯಂತರರು, ವಾರ್ಡ್ ನಂ.70 ರವರು ಮಾತನಾಡಿ, ಸದರಿ ಕಾಮಗಾರಿಯನ್ನು ನಿಲ್ಲಿಸುವಂತೆ ಸಾರ್ವಜನಿಕರು ಮಾನ್ಯ ಸ್ಥಳೀಯ ಶಾಸಕರಿಗೆ ದೂರು ಸಲ್ಲಿಸಿದ್ದು, ಮಾನ್ಯ ಸ್ಥಳೀಯ ಶಾಸಕರ ಆದೇಶದಂತೆ ಸದರಿ ಕಾಮಗಾರಿಯನ್ನು ಸ್ಥಗಿತಗೊಳಿಸಲಾಗಿದೆ ಎಂದು ಸಭೆಗೆ ತಿಳಿಸಿದರು.
  - ಖಾಲಿ ಇರುವ ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿಗೆ ಕಂದಾಯ ಅಧಿಕಾರಿ ರವರ ಕಛೇರಿಯನ್ನು ಸ್ಥಳಾಂತರಿಸುವ ಬಗ್ಗೆ: ಹೇಮಂತ್ ಕುಮಾರ್ ಎಸ್.ಕೆ ಸಹಾಯಕ ಅಭಿಯಂತರರು, ವಾರ್ಡ್ ನಂ.70 ರವರು ಮಾತನಾಡಿ, ನೂತನ ಕಟ್ಟಡಕ್ಕೆ Hand Railing ಅಳವಡಿಸುವ ಕಾರ್ಯ ಬಾಕಿ ಇದ್ದು, ಕೆಲವೇ ದಿನಗಳಲ್ಲಿ ಸ್ಥಳಾಂತರಿಸಲು ಸ್ಥಳಾವಕಾಶ ಒದಗಿಸಿಕೊಡಲಾಗುವುದೆಂದು ತಿಳಿಸಿದರು.

- <u>ಬೀದಿದೀಪ ನಿರ್ವಹಣೆ ಬಗ್ಗೆ</u>
    - ಹೇಮಂತ್ ಕುಮಾರ್ ಎಸ್.ಕೆ ಸಹಾಯಕ ಅಭಿಯಂತರರು, ವಾರ್ಡ್ ನಂ.70 ರವರು ಮಾತನಾಡಿ, ಅನ್ನಪೂರ್ಣೇಶ್ವರಿ ನಗರದ ವೀರಬ್ರಹ್ಮೇಂದ್ರ ದೇವಸ್ಥಾನದ 5-6 ಕಡೆಗಳಲ್ಲಿ ಬೀದಿದೀಪ ಉರಿಯುತ್ತಿಲ್ಲವೆಂದು ತಿಳಿಸಿ ದುರಸ್ತಿಪಡಿಸಲು ಕೋರಿದರು.
        - ಇದಕ್ಕೆ ಗಿರೀಶ್, ಗುತ್ತಿಗೆದಾರರು, ಬೀದಿದೀಪಗಳ ನಿರ್ವಹಣೆರವರು ಪ್ರತಿಕ್ರಿಯಿಸಿ ಈ ದಿನವೇ ದುರಸ್ತಿಪಡಿಸುವುದಾಗೀ ತಿಳಿಸಿದರು.

- <u>ಸ್ವಚ್ಛತೆ ಮತ್ತು ಘನ ತ್ಯಾಜ್ಯ ನಿರ್ವಹಣೆ ಬಗ್ಗೆ:</u>
    - ಶಿವಲಿಂಗಯ್ಯ.ಕೆ, ಹಿರಿಯ ಆರೋಗ್ಯ ಪರಿವೀಕ್ಷಕರು, ಮಾತನಾಡುತ್ತಾ, ಪೌರಕಾರ್ಮಿಕರಿಗೆ ಬಟ್ಟೆ ಬದಲಾಯಿಸಲು ಹಾಗೂ ವಿಶ್ರಾಂತಿಗಾಗಿ Mustering Centreಗಳಲ್ಲಿ ವಿಶ್ರಾಂತಿ ಕೊಠಡಿಗಳನ್ನು ನಿರ್ಮಿಸಿಕೊಡಲು ಸ್ಥಳಾವಕಾಶ ಒದಗಿಸಿಕೊಡಲು ಕೋರಿದರು ಹಾಗೂ ಜಿ.ಕೆ.ಡಬ್ಲ್ಯೂ ಲೇಔಟ್ ಪಾರ್ಕಿನಲ್ಲಿರುವ ಶೌಚಾಲಯದ ಮೇಲೆ ವಿಶ್ರಾಂತಿ ಕೊಠಡಿಗಳನ್ನು ನಿರ್ಮಿಸಿಕೊಡಲು ಕೋರಿದರು.
        - ಇದಕ್ಕೆ ಹೇಮಂತ್ ಕುಮಾರ್ ಎಸ್.ಕೆ ಸಹಾಯಕ ಅಭಿಯಂತರರು, ವಾರ್ಡ್ ನಂ.70 ರವರು ಪ್ರತಿಕ್ರಿಯಿಸಿ ಜಿ.ಕೆ.ಡಬ್ಲ್ಯೂ ಲೇಔಟ್ ಪಾರ್ಕಿನಲ್ಲಿರುವ ಶೌಚಾಲಯದ ಮೇಲೆ ವಿಶ್ರಾಂತಿ ಕೊಠಡಿಗಳನ್ನು ನಿರ್ಮಿಸಿಕೊಡಲು ಅನುದಾನದ ಕೊರತೆಯಿದ್ದು, ಅನುದಾನ ಲಭ್ಯವಾದಲ್ಲಿ ಪ್ರಸ್ತಾವನೆ ಸಲ್ಲಿಸಲಾಗುವುದೆಂದು ತಿಳಿಸಿದರು.
    - ನೋಡಲ್ ಅಧಿಕಾರಿರವರು ವಾರ್ಡ್ 70ರ ವ್ಯಾಪ್ತಿಯಲ್ಲಿರುವ ಬ್ಲಾಕ್ ಸ್ಪಾಟ್‌ಗಳ ಬಗ್ಗೆ ವಿಚಾರಿಸಲಾಗೀ, ಇದಕ್ಕೆ ತ್ರೀವೇಣಿ, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70 ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿನಿತ್ಯವು ಬ್ಲಾಕ್‌ಸ್ಪಾಟ್‌ಗಳನ್ನು ತೆರವುಗೊಳಿಸುಲಾಗುತ್ತಿದೆ ಎಂಬ ಮಾಹಿತಿಯನ್ನು ಸಭೆಗೆ ತಿಳಿಸಿದರು.

- <u>ಕೋವಿಡ್-19, ಸಾಂಕ್ರಾಮಿಕ ರೋಗದ ಬಗ್ಗೆ</u>
    - ಶಿವಲಿಂಗಯ್ಯ.ಕೆ, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70 ರವರು ಮಾತಾನಾಡಿ ವಾರ್ಡ್ 70ರ ವ್ಯಾಪ್ತಿಯಲ್ಲಿ ಪ್ರತಿ ದಿನ 180-200 ಟೆಸ್ಟ್ ನಡೆಸಲಾಗಿದ್ದು, ಇವುಗಳಲ್ಲಿ ಬೆರಳಣಿಕೆ ಸಂಖ್ಯೆಯಲ್ಲಿ ಸೋಂಕಿತರು ಕಂಡುಬರುತ್ತಿದ್ದು, ಸಾರ್ವಜನಿಕರಲ್ಲಿ ಹಾಗೂ ಬೀದಿ ವ್ಯಾಪಾರಿಗಳಲ್ಲಿ ಸ್ವಚ್ಛತೆ ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಬಗ್ಗೆ ಅರಿವು ಮೂಡಿಸಲಾಗಿದೆ ಎಂದು ತಿಳಿಸಿದರು.
    -

- <u>ರಸ್ತೆ ಗುಂಡಿಗಳ ನಿರ್ವಹಣೆ ಬಗ್ಗೆ</u>
    - ಹೇಮಂತ್ ಕುಮಾರ್ ಎಸ್.ಕೆ ಸಹಾಯಕ ಅಭಿಯಂತರರು, ವಾರ್ಡ್ ನಂ.70 ರವರು ಮಾತನಾಡಿ ವಾರ್ಡ್ ವ್ಯಾಪ್ತಿಯ ಅನ್ನಪೂರ್ಣೇಶ್ವರಿನಗರದ ಮುಖ್ಯರಸ್ತೆಯಲ್ಲಿ ರಸ್ತೆಯಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಮುಚ್ಚಿಸಲಾಗಿದ್ದು, ಇನ್ನುಳಿದ ರಸ್ತೆಗುಂಡಿಗಳನ್ನು ಪಟ್ಟಿ ಮಾಡಿಕೊಂಡು ವೆಟ್ ಮಿಕ್ಸ್ ಅಳವಡಿಸಲಾಗಿದೆ. ಇನ್ನು 4-5 ದಿನಗಳಲ್ಲಿ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

- **ಮಾನ್ಯ ಆಯುಕ್ತರು, BBMP My City My Budget 2021-22ರ ಸಂಬಂಧ: ಸಾರ್ವಜನಿಕ ಶೌಚಾಲಯ ಹಾಗೂ ಪಾದಚಾರಿ ಮಾರ್ಗಗಳಿಗೆ ಸಂಬಂಧಿಸಿದಂತೆ ಪ್ರಸ್ತಾಪಿಸಲು ಸೂಚಿಸಿರುವಂತೆ**
  - ಶ್ರೀಮತಿ ಕಮಲ ಹೆಚ್, ನೋಡಲ್ ಅಧಿಕಾರಿ ವಾರ್ಡ್ 70 ರವರು ಮಾತಾನಾಡಿ ಮಾನ್ಯ ಆಯುಕ್ತರು, BBMP My City My Budget 2021-22ರ ಸಂಬಂಧ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕ ಶೌಚಾಲಯ ಹಾಗೂ ಪಾದಚಾರಿ ಮಾರ್ಗಗಳನ್ನು ನಿರ್ಮಿಸಲು ಸ್ಥಳಾವಕಾಶದ ಬಗ್ಗೆ ವಾರ್ಡ್ ಕಮಿಟಿ ಸಭೆಯಲ್ಲಿ ಪ್ರಸ್ತಾಪಿಸಲು ಸೂಚಿಸಿರುವುದನ್ನು ಸಭೆಗೆ ತಿಳಿಸಿ, ಸದರಿ ವಿಷಯದ ಸಂಬಂಧ ಚರ್ಚಿಸಲಾಗಿ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕ ಶೌಚಾಲಯವನ್ನು ನಿರ್ಮಿಸಲು ಸ್ಥಳಾವಕಾಶ ಇಲ್ಲದಿರುವುದಾಗೀ ಸಭೆಯಲ್ಲಿ ಹಾಜರಿದ್ದ ಕಂದಾಯ ಪರಿವೀಕ್ಷಕರು ಹಾಗೂ ವಾರ್ಡ್ ಅಭಿಯಂತರರು ತಿಳಿಸಿದರು.
    - ಹೇಮಂತ್ ಕುಮಾರ್ ಎಸ್.ಕೆ ಸಹಾಯಕ ಅಭಿಯಂತರರು, ವಾರ್ಡ್ ನಂ.70 ರವರು ಮಾತನಾಡಿ ವಾರ್ಡ್ 70 ವ್ಯಾಪ್ತಿಯಲ್ಲಿ ರಸ್ತೆಗಳು ಕಿರಿದಾಗಿದ್ದು, ಪಾದಚಾರಿ ಮಾರ್ಗಗಳನ್ನು ಅಳವಡಿಸಲು ಸ್ಥಳಾವಕಾಶ ಇರುವುದಿಲ್ಲ ಎಂದು ತಿಳಿಸಿದರು ಹಾಗೂ ಜಿ.ಕೆ.ಡಬ್ಲ್ಯೂ ಲೇಔಟ್‌ನ ಪಾರ್ಕ್ ರಸ್ತೆಯಲ್ಲಿ ಪಾದಚಾರಿ ಮಾರ್ಗವನ್ನು ಅಳವಡಿಸಲು ಸ್ಥಳಾವಕಾಶ ಇದ್ದರಿಂದ ಸದರಿ ರಸ್ತೆಯಲ್ಲಿ ಫುಟ್‌ಫಾತ್ ಕಾಮಗಾರಿಯನ್ನು ಕೈಗೊಳ್ಳಲು ಅನುದಾನ ಮಂಜೂರಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿರುತ್ತದೆ ಎಂಬ ವಿಷಯವನ್ನು ಸಭೆಗೆ ತಿಳಿಸಿದರು.
- **ಒಳಚರಂಡಿ ಮತ್ತು ನೀರು ಸಂಪರ್ಕಗಳಿಗೆ ಸಂಬಂಧಿಸಿದ ಸಮಸ್ಯೆಗಳ ಬಗ್ಗೆ**
  - ಶಿವಲಿಂಗಯ್ಯ.ಕೆ, ಹಿರಿಯ ಆರೋಗ್ಯ ಪರಿವೀಕ್ಷಕರು, ಮಾತನಾಡುತ್ತಾ, ದೊಡ್ಡಣ್ಣ ಕೈಗಾರಿಕಾ ಪ್ರದೇಶ ಮುಖ್ಯರಸ್ತೆಯ ನಂದಿನಿ ಗಾರ್ಡನ್ ಬಳಿ ಮ್ಯಾನ್ ಹೋಲ್ Overflow ಆಗಿ ಹರಿಯುತ್ತಿದ್ದು, ಈ ಬಗ್ಗೆ ಕ್ರಮವಹಿಸಲು ಕೋರಿದರು.
    - ಈ ಬಗ್ಗೆ ರಾಮಕೃಷ್ಣೇಗೌಡ ಎನ್.ಎಲ್, ಕೆಲಸ ಪರಿವೀಕ್ಷಕರು ಮಾತನಾಡಿ ಸಭೆ ಮುಗಿದ ಬಳಿಕ ಸ್ಥಳ ಪರಿಶೀಲಿಸಿ ಸಮಸ್ಯೆಯನ್ನು ಪರಿಹರಿಸಲು ಕ್ರಮ ಕೈಗೊಳ್ಳುವುದಾಗೀ ತಿಳಿಸಿದರು.

➢ ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಹೇಮಂತ್ ಕುಮಾರ್ ಎಸ್ ಕೆ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Sd/- 7/12/2020 — Hkamala. 7/12/2020

**ಸದಸ್ಯ ಕಾರ್ಯದರ್ಶಿ–ವಾರ್ಡ್ 70 ಹಾಗೂ ಸಹಾಯಕ ಅಭಿಯಂತರರು,**

**(ಕಮಲ ಹೆಚ್)**
**ನೋಡಲ್ ಅಧಿಕಾರಿ ವಾರ್ಡ್–70**

**ಪ್ರತಿಯನ್ನು:**

1) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
2) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
6) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
8) ಕಛೇರಿ ಕಡತಕ್ಕೆ